# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಉತ್ತರ ಕನ್ನಡ ಜಿಲ್ಲೆ, ಹಳಿಯಾಳ ತಾಲ್ಲೂಕಿನ 3 ಗ್ರಾಮ ಪಂಚಾಯತ್‌ಗಳ ಕುಡಿಯುವ ನೀರು ಸರಬರಾಜು ಕಾಮಗಾರಿಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ: ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಗೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಇವರ ನಡವಳಿ ಮನವಿ ದಿನಾಂಕ:01.03.2017.

—

**ಪೀಠಿಕೆ:**

ಮೇಲೆ ಓದಲಾದ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರ ನಡವಳಿಯಲ್ಲಿ ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ತಾಲ್ಲೂಕಿನ 3 ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು ಕಾಮಗಾರಿಗಳಿಗೆ ವಿಶೇಷ ಅನುದಾನದಡಿಯಲ್ಲಿ ಅನುದಾನ ಬಿಡುಗಡೆ ಮಾಡಲು ಕೋರಿರುತ್ತಾರೆ.

ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರು ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ತಟ್ಟಗೇರಿ ಗ್ರಾಮ ಪಂಚಾಯಿತಿಯ ತಟ್ಟೀಗೇರಿ, ಗುಂಡೋಳ್ಳಿ ಗ್ರಾಮ ಪಂಚಾಯಿತಿಗೆ ಸೇರಿದ ಕಾಳಗಿನಕೊಪ್ಪ ಮತ್ತಿತರ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಬಹಳ ಗಂಭೀರವಾಗಿರುವುದನ್ನು ಸರ್ಕಾರದ ಗಮನಕ್ಕೆ ತಂದಿರುತ್ತಾರೆ. ಸದರಿ ಸಮಸ್ಯೆ ಬಗೆಹರಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ-ವಿಭಾಗ ಹಳಿಯಾಳ ಇವರು ಅಂದಾಜು ಪತ್ರಿಕೆಗಳೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ತಾಲ್ಲೂಕಿನ 3 ಗ್ರಾಮಗಳಿಗೆ ಕುಡಿಯುವ ನೀರಿನ ಅಭಾವ ಉಂಟಾಗಿರುವುದರಿಂದ ಸದರಿ ಗ್ರಾಮಗಳಿಗೆ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಸರ್ಕಾರ ನಿರ್ಧರಿಸಿದೆ. ಆದ್ದರಿಂದ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/13/ಗ್ರಾನೀಸ(3)/2017 ಬೆಂಗಳೂರು, ದಿನಾಂಕ: 09.03.2017.**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಈ ಕೆಳಗಿನ ಎಲ್ಲ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ. ಈ ಕಾಮಗಾರಿಗಳನ್ನು IMIS ನಲ್ಲಿ ದಾಖಲಿಸಿ KTPP ನಿಯಮಾನುಸಾರ ಅನುಷ್ಠಾನಗೊಳಿಸಿ ಕಾಮಗಾರಿಗಳ ಎಲ್ಲಾ ವಿವರಗಳನ್ನು GSK ನಲ್ಲಿ ದಾಖಲಿಸಿ ಅನುದಾನವನ್ನು NRDWP ಯೋಜನೆಯ ಕೇಂದ್ರ ಹಾಗೂ ರಾಜ್ಯದ ಪಾಲಿನಲ್ಲಿ ವೆಚ್ಚ ಭರಿಸಲು ಅನುಮೋದಿಸಿದೆ.

| ಕ್ರಸಂ | ಕಾಮಗಾರಿ ಹೆಸರು | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| 1 | ಹಳಿಯಾಳ ತಾಲ್ಲೂಕಿನ ತಟ್ಟಗೇರಿ ಪಂಚಾಯಿತಿಯ ತಟ್ಟೀಗೇರಿ ಗ್ರಾಮದಲ್ಲಿ ಕುಡಿಯುವ ನೀರು ಸರಬರಾಜು ಪೂರೈಕೆ ಯೋಜನೆ (ಮಾವಿನಕೊಪ್ಪ ಕೆರೆ) | 9.20 |
| 2 | ಹಳಿಯಾಳ ತಾಲ್ಲೂಕಿನ ಗುಂಡೋಳ್ಳಿ ಪಂಚಾಯಿತಿಯ ಕಾಳಗಿನಕೊಪ್ಪ ಗ್ರಾಮದಲ್ಲಿ ಕುಡಿಯುವ ನೀರು ಸರಬರಾಜು ಪೂರೈಕೆ ಯೋಜನೆ (ಮಲವಾಡಿ ಬ್ರಿಡ್ಜ್ ಹತ್ತಿರ) | 12.50. |
| 3 | ಹಳಿಯಾಳ ತಾಲ್ಲೂಕಿನ ತತ್ವಣಗಿ ಪಂಚಾಯಿತಿಯ ಅಮ್ಮನಕೊಪ್ಪ ಗ್ರಾಮದಲ್ಲಿ ಕೊಳವೆ ನೀರು ಸರಬರಾಜು ನೀರಿನ ಸುಧಾರಣೆ. | 14.50 |
| | **ಒಟ್ಟು ಮೊತ್ತ :** | **36.20** |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಬಿ. ಕೃಷ್ಣಪ್ಪ)**
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.

2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ,ವಿಧಾನಸೌಧ, ಬೆಂಗಳೂರು.
7. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು-09
8. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
9. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿಭವನ, ಬೆಂಗಳೂರು-09.
10. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಉತ್ತರ ಕನ್ನಡ ಜಿಲ್ಲಾ ಪಂಚಾಯತ್.
11. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಬೆಂಳಗಾಂ.
12. ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಉತ್ತರ ಕನ್ನಡ.
13. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
14. ಆಯುಕ್ತರು, RDWSD ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ / ಆಂತರಿಕ ಆರ್ಥಿಕ ಸಲಹೆಗಾರರು / ಇವರುಗಳ ಆಪ್ತ ಸಹಾಯಕರು.
15. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
16. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
17. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
18. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
19. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
20. ಶಾಖಾ ರಕ್ಷಾ ಕಡತಃ ಹೆಚ್ಚುವರಿ ಪ್ರತಿಗಳು.